ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 259/2022

(ಪ್ರಾಸಾ-7 ಚಾಸಾ-12)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 25.09.2024.

| | | |
|---|---|---|
| ಸಾಕ್ಷಿದಾರರ ಹೆಸರು | - | ಕಲ್ಯಾಣ್ ಕುಮಾರ್ |
| ತಂದೆಯ ಹೆಸರು | - | ಸಣ್ಣೆಯಿಬಣ್ಣ |
| ವಯಸ್ಸು | - | 53 ವರ್ಷ, |
| ಉದ್ಯೋಗ | - | ಚಾಲಕ |
| ವಾಸ | - | ಹೆಬ್ಬಗೋಡಿ |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ಚಾಸಾ-11 ನನ್ನ ಸ್ನೇಹಿತರು. ಮೃತ ಸಾಗರ್ ನನಗೆ ಗೊತ್ತಿಲ್ಲ. ಈಗ ಸುಮಾರು 2-3 ವರ್ಷದ ಹಿಂದೆ ಚಾಸಾ-11 ರವರೊಂದಿಗೆ ನಾನು ಹೆಬ್ಬಗೋಡಿ ಪೋಲಿಸ್ ಠಾಣೆಗೆ ಹೋಗಿದ್ದೆ. ಚಾಸಾ-11 ರವರ ಸಂಬಂಧಿಕರು ತೀರಿಹೋಗಿದ್ದಾರೆ ಎಂದು ನಾನು ಅವರೊಂದಿಗೆ ಠಾಣೆಗೆ ಹೋಗಿದ್ದೆ. ಪೋಲಿಸರು ಒಂದು ಮೃತದೇಹದ ಫೋಟೋವನ್ನು ತೋರಿಸಿದ್ದು ಸದರಿ ವ್ಯಕ್ತಿಯು ನನಗೆ ಗೊತ್ತಿಲ್ಲ ಎಂದು ಹೇಳಿದೆ. ಈಗ ನ್ಯಾಯಾಲಯದಲ್ಲಿ ನಾನು ನೋಡುತ್ತಿರುವ ನಿಪಿ-7 ರಲ್ಲಿರುವ ಫೋಟೋವನ್ನು ಪೋಲಿಸರು ನನಗೆ ತೋರಿಸಿದ್ದರು ಎಂದರೆ ನನಗೆ ನೆನಪಿಲ್ಲ. ಇದನ್ನು ಹೊರತು ನನಗೆ ಬೇರೆ ಯಾವುದೇ ವಿಚಾರಗಳು ಗೊತ್ತಿಲ್ಲ. ಮೃತ ವ್ಯಕ್ತಿ ಯಾವ ಕಾರಣಕ್ಕಾಗಿ ಮೃತರಾಗಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನಂತರ ನಾನು ಮತ್ತು ಚಾಸಾ-11 ಮನೆಗೆ ಹೋದೆವು.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಎಸ್ ಪಿಪಿ ರವರು ವಿನಂತಿಸಿದ್ದರಿಂದ ಸಾಕ್ಷಿಯ ಹೇಳಿಕೆ ಹಾಗೂ ಇತರೆ ನ್ಯಾಯಾಲಯದ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ</u>

2. ದಿಃ19.01.2022 ರಂದು ನಿಪಿ-7 ರಲ್ಲಿರುವ ಫೋಟೋವನ್ನು ಪೋಲಿಸರು ನನಗೆ ತೋರಿಸಿದಾಗ ನಾನು ಈತನೇ ಸಾಗರ್ ಎಂದು ಗುರುತಿಸಿರುತ್ತೇನೆ ಎಂದರೆ ಸರಿಯಲ್ಲ. ಸಾಗರ್ ಮೃತಪಟ್ಟ ಕಾರಣ ಸಹ ನನಗೆ ತಿಳಿದುಬಂದಿದ್ದು ನಾನು ಪೋಲಿಸರಿಗೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೆನೆ ಎಂದರೆ ಸರಿಯಲ್ಲ. "ದಿಃ18.01.2022 ರಂದು ಬೆಳಿಗ್ಗೆ ಹುಲಿಮಂಗಲ ಗ್ರಾಮ ---------- ಕಾನೂನು ರೀತಿ ಕ್ರಮ ಜರುಗಿಸಲು ಕೋರಿದೆ" ಎಂದು ನಾನು ಪೋಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಶಾನೆ ಪಿ-13 ಎಂದು ಗುರುತಿಸಲಾಯಿತು. ನಾನು ನಿಪಿ-13 ರಂತೆ ಪೋಲಿಸರ ಮುಂದೆ ಹೇಳಿಕೆ ನೀಡಿದ್ದರೂ ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 1 ನೇ ಆರೋಪಿತರ ಪರ ಶ್ರೀ ಸಿ ಎಂ ವಕೀಲರಿಂದಃ</u>**

3. ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

**<u>ಪಾಟೀ ಸವಾಲುಃ 2 ನೇ ಆರೋಪಿತರ ಪರ ಶ್ರೀ ಆರ್ ಎಸ್ ವಕೀಲರಿಂದಃ</u>**

4. ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸುತ್ತಾರೆ.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು